RNU AIR DHARWAD

**APRIL 23,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಜಮ್ಮು ಕಾಶ್ಮೀರದ ಪಹಲಗಾಂವ**ನಲ್ಲಿ, ಭಯೋತ್ಪಾದಕ ಕೃತ್ಯ ಎಸಗಿದ ಉಗ್ರರ ಪತ್ತೆ ಕಾರ್ಯ ಭಾರತೀಯ ಸೇನೆ, ಸಿ.ಆರ್.ಪಿ.ಎಫ್ ಹಾಗೂ ಜಮ್ಮು ಮತ್ತು ಕಾಶ್ಮೀರ ಪೊಲೀಸರಿಂದ ಜಂಟಿಯಾಗಿ ಮುಂದುವರೆದಿದೆ. ಸೌದಿ ಅರೇಬಿಯಾ ಪ್ರವಾಸದಿಂದ ದೆಹಲಿಗೆ ಹಿಂತಿರುಗಿದ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ವಿಮಾನ ನಿಲ್ದಾಣದಲ್ಲಿ ವಿದೇಶಾಂಗ ಖಾತೆ ಸಚಿವ ಎಸ್. ಜೈಶಂಕರ, ರಾಷ್ಟ್ರೀಯ ರಕ್ಷಣಾ ಸಲಹೆಗಾರರು ಹಾಗೂ ವಿದೇಶಾಂಗ ಕಾರ್ಯದರ್ಶಿ ಜೊತೆ ಕಾಶ್ಮೀರದಲ್ಲಿ ಭದ್ರತೆ ಹಾಗೂ ಪ್ರವಾಸಿಗರ ಸುರಕ್ಷತೆ ಬಗ್ಗೆ ತುರ್ತು ಸಭೆ ನಡೆಸಿದರು. ಪ್ರವಾಸಿಗರನ್ನು ಸುರಕ್ಷಿತವಾಗಿ ಹಿಂತಿರುಗಿಸುವ ನಿಟ್ಟಿನಲ್ಲಿ, ಕೇಂದ್ರ ಗೃಹ ಇಲಾಖೆ ಕಾರ್ಯೋನ್ಮುಖವಾಗಿದೆ. ದಾಳಿಯಲ್ಲಿ ಸಂತ್ರಸ್ತರಾಗಿರುವ ಕನ್ನಡಿಗರ ಸಹಾಯಕ್ಕೆ ರಾಜ್ಯ ಸರ್ಕಾರ ಸಹಾಯವಾಣಿಯನ್ನು ಆರಂಭಿಸಿದೆ, ನಾಗರಿಕರು 080–433, 33, 334, 080–433, 33, 335, ಹಾಗೂ 080– 433, 33, 336 ಸಂಖ್ಯೆಗೆ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ. ಕುಟುಂಬಸ್ಥರು ಹಾಗೂ ಆಪ್ತರು ಕಾಶ್ಮೀರ ಪ್ರವಾಸದಲ್ಲಿದ್ದರೆ ಅವರ ಮಾಹಿತಿಯನ್ನು ನೀಡಬಹುದಾಗಿದೆ.

<><><>

**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ** ಸೂಚನೆ ಮೇರೆಗೆ ಪೊಲೀಸ್ ಅಧಿಕಾರಿಗಳನ್ನು ಒಳಗೊಂಡ ಅಧಿಕಾರಿಗಳ ಒಂದು ತಂಡ ಕಾಶ್ಮೀರಕ್ಕೆ ಪ್ರಯಾಣ ಬೆಳೆಸಿದೆ. ರಾಜ್ಯ ಕಾರ್ಮಿಕ ಖಾತೆ ಸಚಿವ ಸಂತೋಷ್ ಲಾಡ್ ಶ್ರೀನಗರ ತಲುಪಿದ್ದು, ರಾಜ್ಯ ಪ್ರವಾಸಿಗರನ್ನು ಸುರಕ್ಷಿತವಾಗಿ ಹಿಂತಿರುಗಿಸುವ ನಿಟ್ಟಿನಲ್ಲಿ ಕಾರ್ಯಾಚರಣೆಯ ಮೇಲ್ವಿಚಾರಣೆ ನಿರ್ವಹಿಸುತ್ತಿದ್ದಾರೆ.

<><><>

**ಜಮ್ಮು ಕಾಶ್ಮೀರದಲ್ಲಿ ಪ್ರವಾಸಿಗರ** ಮೇಲೆ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಚಿಕ್ಕಮಗಳೂರು ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು. ನಗರದ ಹನುಮಂತಪ್ಪ ವೃತದಲ್ಲಿ ಬಿ.ಜೆ.ಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

<><><>

**ಇಂದು ವಿಶ್ವ ಪುಸ್ತಕ ದಿನ.** ಪುಸ್ತಕಗಳು ಜ್ಞಾನವಿಕಾಸದ ದ್ಯೋತಕಗಳಾಗಿವೆ.ಕೊಪ್ಪಳ ಜಿಲ್ಲೆ, ಬಸವೇಶ್ವರ ನಗರದ, ಹಿಂದುಳಿದ ಕಾಲನಿಯ, ಹನುಮಂತ ದೇವಸ್ಥಾನದ ಆವರಣದಲ್ಲಿ, ಡಾಕ್ಟರ ಬಿ.ಆರ್ ಅಂಬೇಡ್ಕರ್ ಜಯಂತಿಯಂದು ಆರಂಭಿಸಲಾದ ಗುಡಿ ಗ್ರಂಥಾಲಯವು ಗ್ರಾಮದ ಮಕ್ಕಳನ್ನು ಆಕರ್ಷಿಸುತ್ತಿದೆ. ದಿನಪತ್ರಿಕೆ, ನಿಯತಕಾಲಿಕೆಗಳು ಸಹಿತ ಮಕ್ಕಳ ಕಥೆ ಪುಸ್ತಕಗಳಿರುವ ಈ ಗುಡಿ ಗ್ರಂಥಾಲಯದ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ ಗ್ರಂಥಾಲಯದ ರೂವಾರಿ ಮಹಾಲಕ್ಷ್ಮೀ ಕಂದಾರಿ ಅವರು...

<><><>

**ಬೈಟ್: ಮಹಾಲಕ್ಷ್ಮೀ ಕಂದಾರಿ 36 ಸೆಕೆಂದುಗಳು**

<><><>

**ಗ್ರಾಮೀಣ ಆರ್ಥಿಕ ಅಭಿವೃದ್ಧಿಯ ದೃಷ್ಟಿಯಿಂದ** ರಾಜ್ಯ ಸರ್ಕಾರವು, ರಾಜ್ಯಾದ್ಯಂತ ದೊಡ್ಡ ಪ್ರಮಾಣದಲ್ಲಿ ಚಿಟ್ ವ್ಯವಹಾರ ಯೋಜನೆಯನ್ನು ಆರಂಭಿಸಲಿದೆ ಎಂದು ರಾಜ್ಯ ಕೈಗಾರಿಕಾ ಖಾತೆ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು ಎಂ.ಎಸ್.ಐ.ಎಲ್– ಮೈಸೂರ ಸೇಲ್ಸ್ ಇಂಟರ್ನ್ಯಾಶನಲ್ ಲಿಮಿಟೆಡ್ ಈಗಾಗಲೇ ಬೆಂಗಳೂರಿನ ನಾಲ್ಕು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಪೈಲಟ್ ಯೋಜನೆ ಕೈಗೊಂಡು, ಯಶಸ್ವಿಯಾಗಿದೆ. ಇದೇ ಮಾದರಿಯಲ್ಲಿ ರಾಜ್ಯದ ಇತರೆ ಭಾಗಗಳಲ್ಲಿ ಯೋಜನೆಯನ್ನು ವಿಸ್ತರಿಸುವ ಮೂಲಕ ಗ್ರಾಮೀಣ ಆರ್ಥಿಕತೆಗೆ, ಬಲ ತುಂಬಲಿದೆ ಎಂದಿದ್ದಾರೆ.

<><><>

**ರಾಜ್ಯದಲ್ಲಿ ಒಟ್ಟು 11 ಸಾವಿರದ 212** ಕೆರೆ ಒತ್ತುವರಿ ಗುರುತಿಸಲಾಗಿದೆ. 5 ಸಾವಿರದ 967 ಕೆರೆಗಳ ಒತ್ತುವರಿ ತೆರವುಗೊಳಿಸಲಾಗಿದೆ. ಉಳಿದ ಕೆರೆಗಳ ಒತ್ತುವರಿಯನ್ನು ಆದ ್ಟ ಬೇಗ ತೆರವುಗೊಳಿಸಬೇಕು ಎಂದು ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ನಿರ್ಣಯಿಸಲಾಗಿದೆ. ಸಭೆಯ ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಖಾಸಗಿಯವರಿಂದ, ಒತ್ತುವರಿಯಾಗಿರುವ ಪ್ರದೇಶವನ್ನು ಆದಷ್ಟು ಬೇಗ ತೆರವುಗೊಳಿಸಬೇಕು. ಅಂದಾಜು 10 ಸಾವಿರದ 710 ಕೆರೆಗಳ ಅಳತೆ ಬಾಕಿ ಇದ್ದು, ಎರಡು ತಿಂಗಳ ಒಳಗೆ ಸರ್ವೇ ಕಾರ್ಯ ಪೂರ್ಣಗೊಳಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><>

**ಇಂದಿನಿಂದ** 4 ದಿನಗಳ ಕಾಲ ದಾವಣಗೆರೆ ಜಿಲ್ಲಾ  ಪ್ರವಾಸದಲ್ಲಿರುವ ಉಪ ಲೋಕಾಯುಕ್ತ ಬಿ.ವೀರಪ್ಪ ಅವರು, ಮುಂಜಾನೆ ನಗರದ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

<><><>

**ಗದಗ ಜಿಲ್ಲೆಯಲ್ಲಿ ಕುಡಿಯುವ** ನೀರು ಸರಬರಾಜು ಹಾಗೂ ಸಮರ್ಪಕ ನಿರ್ವಹಣೆಗೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಅಧಿಕಾರಿಗಳಿಗೆ ಸೂಚಿಸಿದರು.  ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಜಿಲ್ಲೆಯಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವಿನ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದರು.

<><><>

**ಅಂಗಾಂಗ ದಾನ ನೋಂದಣಿಯಡಿ,**  ಬಳ್ಳಾರಿ ಜಿಲ್ಲೆ ರಾಷ್ಟ್ರ ಮಟ್ಟದಲ್ಲಿ ಎರಡನೇ ಸ್ಥಾನದಲ್ಲಿದ್ದು, ಒಟ್ಟು  8 ಸಾವಿರದ 379 ಜನರು ತಮ್ಮ ಹೆಸರನ್ನು ನೋಂದಾಯಿಸಿದ್ದಾರೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್ ಮಾಹಿತಿ ನೀಡಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>